ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2121
2	ಸದಸ್ಯರ ಹೆಸರು	:	ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3	ಉತ್ತರಿಸುವ ದಿನಾಂಕ	:	25.03.2021
4	ಉತ್ತರಿಸುವ ಸಚಿವರು	:	ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	2019-2020ನೇ ಸಾಲಿನಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಡಿ ಹಾಸನ ಜಿಲ್ಲೆಗೆ ಬಿಡುಗಡೆಯಾಗಬೇಕಾದ ಹಾಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; ಬಾಕಿ ಉಳಿದ ಅನುದಾನವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆ ಮಾಡಲಾಗುವುದು; (ಮಾಹಿತಿ ನೀಡುವುದು)	2019-2020ನೇ ಸಾಲಿನಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಡಿ ಹಾಸನ ಜಿಲ್ಲೆಗೆ ಬಿಡುಗಡೆಯಾಗಬೇಕಾದ ಹಾಗೂ ಬಿಡುಗಡೆಯಾಗಿರುವ ಅನುದಾನದ ವಿವರಗಳು ಕೆಳಕಂಡಂತಿದೆ: (ರೂ.ಲಕ್ಷಗಳಲ್ಲಿ) ವರ್ಷ: 2019-20; ಬಿಡುಗಡೆಯಾದ ಅನುದಾನ: 1492.00; ಬಿಡುಗಡೆಯಾಗ ಬೇಕಾದ ಅನುದಾನ: 308.00 ಬಾಕಿ ಉಳಿದ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಸಂಬಂಧ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 29 ವೆಚ್ಚ 06/2021(ಇ), ದಿನಾಂಕ: 10.03.2021ರಲ್ಲಿ ಕಡಿತಗೊಳಿಸಲಾದ ಅನುದಾನವನ್ನು ಹೆಚ್ಚುವರಿಯಾಗಿ ಒದಗಿಸಲು ಸಾಧ್ಯವಿಲ್ಲವೆಂದು ಹಿಂಬರಹ ನೀಡಿದೆ.
ಆ)	2019-2020ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ಬಿಡುಗಡೆ ಮಾಡಲು ವಿಳಂಬ ಮಾಡುತ್ತಿರುವುದರಿಂದ ಸ್ಥಳೀಯ ಅಭಿವೃದ್ಧಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿ ಅನುದಾನವನ್ನು ಕಾಲಕಾಲಕ್ಕೆ ಬಿಡುಗಡೆ ಮಾಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮ ಕೈಗೊಳ್ಳಲಾಗಿದೆಯೇ? (ಮಾಹಿತಿ ನೀಡುವುದು)	ಹೌದು ಆರ್ಥಿಕ ಇಲಾಖೆಯ ನಿರ್ದೇಶನದಂತೆ ಬಿಡುಗಡೆಯಾದ ಅನುದಾನ ಮತ್ತು ಆರಂಭಿಕ ಶಿಲ್ಕು ಸೇರಿ ಒಟ್ಟು ಅನುದಾನದಲ್ಲಿ ಶೇ.75ರಷ್ಟು ವೆಚ್ಚವಾದಲ್ಲಿ ಮಾತ್ರ ಮುಂದಿನ ಕಂತಿನ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಶೇ. 75 ರಷ್ಟು ವೆಚ್ಚವಾಗದಿದ್ದಲ್ಲಿ ಮುಂದಿನ ಕಂತಿನ ಅನುದಾನ ಬಿಡುಗಡೆಗೆ ಅವಕಾಶವಿರುವುದಿಲ್ಲ. ಅನುದಾನವನ್ನು ಕಾಲಕಾಲಕ್ಕೆ ಬಿಡುಗಡೆ ಮಾಡುವ ಬಗ್ಗೆ, ಶಾಸಕರ ಪ್ರದೇಶಾಭಿವೃದ್ಧಿ ಅನುದಾನವನ್ನು ನಿಗದಿತ ಕಾಲಾವಧಿಯಲ್ಲಿ ವೆಚ್ಚ ಮಾಡಲು ದಿನಾಂಕ:23.06.2020 ರಂದು ಮಾನ್ಯ ಮುಖ್ಯ ಕಾರ್ಯದರ್ಶಿಯವರಿಂದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಹಾಗೂ ದಿನಾಂಕ:23.02.2021 ರಂದು ಖುದ್ದು ವಿಡಿಯೋ ಸಂವಾದದ ಮೂಲಕ ಜಿಲ್ಲಾಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿ ಕ್ರಮ ಕೈಗೊಳ್ಳಲಾಗದೆ.

ಸಂಖ್ಯೆ: ಪಿಡಿಎಸ್ 38 ಕೆಎಲ್‌ಎಸ್ 2021

(ಡಾ|| ನಾರಾಯಣಗೌಡ)
ಸಚಿವರು,
ಯೋಜನೆ, ಕಾರ್ಯಕ್ರಮ ಸಂಯೋಜನ
ಮತ್ತು ಸಾಂಖ್ಯಿಕ ಇಲಾಖೆ.